ಕರ್ನಾಟಕ ಸರ್ಕಾರ

# ಜಿಲ್ಲಾಧಿಕಾರಿಯವರ ಕಛೇರಿ, ರಜತಾದ್ರಿ, ಮಣಿಪಾಲ, ಉಡುಪಿ ಜಿಲ್ಲೆ – 576104

Phone: 0820 - 2574933(O),
0820 - 2574926(F),

E-Mail: deo.udupi@gmail.com,
dudc_udupi@yahoo.co.in
Website: www.udupi.nic.in

ನಂ: ಜಿನಕೋ(2)/ಸಿಬ್ಬಂದಿ/ಸಿಆರ್/49/2015-16 ದಿನಾಂಕ : 07.10.2015

## ಅಧಿಸೂಚನೆ

ವಿಷಯ: ಉಡುಪಿ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಖಾಲಿ ಇರುವ "ಡಿ" ಗ್ರೂಪ್ (ಪೌರಕಾರ್ಮಿಕರು /ಲೋಡರ್ಸ್) ಹುದ್ದೆಗಳನ್ನು ನೇರನೇಮಕಾತಿ ಮೂಲಕ ಭರ್ತಿ ಮಾಡುವ ಕುರಿತು.

ಉಲ್ಲೇಖ:-1.ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ಇವರ ಪತ್ರ ಸಂ: 7817/ಡಿಎಂಎ/135/ಇಎನ್‌ಜಿ/ನೇರ ನೇಮಕಾತಿ/2014-15 ದಿನಾಂಕ: 16.09.2015

2. ಸರಕಾರದ ಅಧಿಸೂಚನೆ ಸಂಖ್ಯೆ: ಯುಡಿಡಿ/52/ಬಿಎಂಎಸ್/2009 ದಿನಾಂಕ: 13.01.2011
3. ಸರಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್/30/ಎಸ್‌ಆರ್‌ಆರ್/2013 ದಿನಾಂಕ: 06.01.2014
4. ಸರಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್/43/ಹೆಚ್‌ಕೆಸಿ/2013 ದಿನಾಂಕ: 19.05.2014
5. ಪೌರಾಡಳಿತ ನಿರ್ದೇಶನಾಲಯದ ಅಧಿಸೂಚನೆ ಸಂಖ್ಯೆ: ಪೌನಿ/ಸಿಬ್ಬಂದಿ/ಹೈಕ/ಮೀಸಲಾತಿ/ಸಿಆರ್ 148/13-14 ದಿನಾಂಕ: 19.05.2014
6. ಸರ್ಕಾರದ ಪತ್ರ ಸಂಖ್ಯೆ: ನಅಇ/112/ಎಂಎನ್‌ಇ/2014 ದಿನಾಂಕ: 07.09.2015

*******

ಉಡುಪಿ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಖಾಲಿ ಇರುವ "ಡಿ" ಗ್ರೂಪ್ (ಪೌರಕಾರ್ಮಿಕರು /ಲೋಡರ್ಸ್) ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ Online ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ನಮೂನೆಗಳನ್ನು ಉಡುಪಿ ಜಿಲ್ಲಾಧಿಕಾರಿ ಕಚೇರಿಯ ಅಧಿಕೃತ ವೆಬ್ ಸೈಟ್ ವಿಳಾಸ http://udupi.nic.in ನಲ್ಲಿ ಅಳವಡಿಸಲಾಗಿದೆ. ಅರ್ಜಿಗಳು ದಿನಾಂಕ:14.10.2015 ರಿಂದ ಸದರಿ ವೆಬ್ ಸೈಟ್ ನಲ್ಲಿ ಚಾಲನೆಯಲ್ಲಿರುತ್ತದೆ. ಅರ್ಜಿಗಳನ್ನು ಆನ್ ಲೈನ್ ಮುಖಾಂತರ ಸಲ್ಲಿಸತಕ್ಕದ್ದು. ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಲು ಅವಕಾಶವಿರುವುದಿಲ್ಲ. ಅರ್ಜಿಗಳನ್ನು ದಿನಾಂಕ: 13.11.2015 ರೊಳಗೆ ಸಲ್ಲಿಸತಕ್ಕದ್ದು .

| ಕ್ರ ಸಂ | ಹುದ್ದೆಯ ಹೆಸರು | ಒಟ್ಟು ಹುದ್ದೆ | ಶೈಕ್ಷಣಿಕ ವಿದ್ಯಾರ್ಹತೆ | ವೇತನ ಶ್ರೇಣಿ |
|---|---|---|---|---|
| 1 | "ಡಿ" ಗ್ರೂಪ್ | ಪೌರ ಕಾರ್ಮಿಕ - 33<br>ಲೋಡರ್ಸ್ - 16<br>ಒಟ್ಟು - 49 | • 10ನೇ ತರಗತಿ (10th Standard Examination conducted by Karnataka Secondary Education Examination Board (KSEEB) or CBSE or ICSE ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.<br>• ಈ ಮೇಲ್ಕಂಡ ವಿದ್ಯಾರ್ಹತೆಯನ್ನು ಹೊರತು ಪಡಿಸಿ ಇನ್ನಿತರ ಯಾವುದೇ ವಿದ್ಯಾರ್ಹತೆಗಳನ್ನು ಈ ಹುದ್ದೆಗೆ ಪರಿಗಣಿಸಲಾಗುವುದಿಲ್ಲ.<br>• Physical fitness – as in Railway Kalashi Standards | 9600-14550 |

## 1. ನಗರ ಸ್ಥಳೀಯ ಸಂಸ್ಥೆವಾರು ಹುದ್ದೆಯ ಹಂಚಿಕೆ :

| ಕ್ರ.ಸಂ | ಸ್ಥಳೀಯ ಸಂಸ್ಥೆಯ ಹೆಸರು | ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಉದ್ದೇಶಿಸಿರುವ ಪೌರ ಕಾರ್ಮಿಕ ಹುದ್ದೆಗಳು | ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಉದ್ದೇಶಿಸಿರುವ ಲೋಡರ್ಸ್ ಹುದ್ದೆಗಳು | ಒಟ್ಟು |
|---|---|---|---|---|
| 1 | 2 | 3 | 4 | 5 |
| 1 | ಉಡುಪಿ ನಗರಸಭೆ | 19 | 11 | 30 |
| 2 | ಕಾರ್ಕಳ ಪುರಸಭೆ | 2 | - | 2 |
| 3 | ಕುಂದಾಪುರ ಪುರಸಭೆ | 5 | 1 | 6 |
| 4 | ಸಾಲಿಗ್ರಾಮ ಪಟ್ಟಣ ಪಂಚಾಯತ್ | 7 | 4 | 11 |
| | ಒಟ್ಟು | 33 | 16 | 49 |

## 2. ಹುದ್ದೆಯ ವರ್ಗೀಕರಣ :

| ( ರೋಸ್ಟರ್ ಬಿಂದು 01 ರಿಂದ 49 ರವರೆಗೆ) | | | | | | | | | |
|---|---|---|---|---|---|---|---|---|---|
| ಕ್ರ.ಸ. | ವರ್ಗೀಕರಣದ ವಿವರ | ಇತರ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲರು | ಮಾಜಿ ಸೈನಿಕರು | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತರು | ಒಟ್ಟು |
| 1 | ಪರಿಶಿಷ್ಟ ಜಾತಿ | 2 | 3 | 2 | 1 | 0 | 0 | 0 | 8 |
| 2 | ಪ.ಪಂ | 1 | 1 | 0 | 0 | 0 | 0 | 0 | 2 |
| 3 | ಪ್ರವರ್ಗ-1 | 1 | 1 | 0 | 0 | 0 | 0 | 0 | 2 |
| 4 | ಪ್ರವರ್ಗ-2ಎ | 2 | 2 | 2 | 1 | 0 | 0 | 0 | 7 |
| 5 | ಪ್ರವರ್ಗ-2ಬಿ | 1 | 1 | 0 | 0 | 0 | 0 | 0 | 2 |
| 6 | ಪ್ರವರ್ಗ-3ಎ | 1 | 1 | 0 | 0 | 0 | 0 | 0 | 2 |
| 7 | ಪ್ರವರ್ಗ-3ಬಿ | 1 | 1 | 0 | 0 | 0 | 0 | 0 | 2 |
| 8 | ಸಾಮಾನ್ಯ ಅರ್ಹತೆ | 5 | 7 | 6 | 2 | 2 | 1 | 1 | 24 |
| | ಜುಮ್ಲಾ | 14 | 17 | 10 | 4 | 2 | 1 | 1 | 49 |

**ಷರಾ** : ಸರಕಾರದ ಆದೇಶ ಸಂ: ಸಿಆಸು ಇ 128 ಸೆನೆನಿ 2006 ದಿನಾಂಕ: 1.8.2009 ರಂತೆ 4 ಮತ್ತು 24ನೇ ಬಿಂದುಗಳನ್ನು ದೃಷ್ಟಿ ಮಾಂದ್ಯತೆ ಹೊಂದಿದ ಅಭ್ಯರ್ಥಿಗಳಿಗೆ ಮೀಸಲಿರಿಸಬೇಕಾಗಿರುತ್ತದೆ. ಪ್ರಸ್ತುತ "ಡಿ" ಗ್ರೂಪ್ (ಪೌರಕಾರ್ಮಿಕ/ಲೋಡರ್ಸ್) ನೇಮಕಾತಿಯಲ್ಲಿ ಸಾಮಾನ್ಯ ವರ್ಗದಡಿ ಅಂಗವಿಕಲತೆ ಬಿಂದು 4 ಆಗಿರುತ್ತದೆ. ಆದರೆ ಸರಕಾರದ ಆದೇಶ ಸಂ: ಡಿಪಿಎಆರ್ 54 ಎಸ್ ಆರ್ ಆರ್ 2012 ದಿನಾಂಕ: 23.6.2012 ರಂತೆ 'ಡಿ" ಗ್ರೂಪ್ (ಪೌರಕಾರ್ಮಿಕ/ಲೋಡರ್ಸ್) ಹುದ್ದೆಗೆ ದೃಷ್ಟಿ ಮಾಂದ್ಯತೆಯನ್ನು ಪರಿಗಣಿಸಲಾಗುವುದಿಲ್ಲ. ಅಲ್ಲದೇ ಈ ಹುದ್ದೆಗಳು ಸ್ವಚ್ಛತಾ ಕಾರ್ಯಗಳಿಗೆ ಸಂಬಂಧಿಸಿದ ಹುದ್ದೆಗಳಾಗಿದ್ದು, ದೈಹಿಕ ಶ್ರಮದ ಅಗತ್ಯವಿರುತ್ತದೆ. ಆದ್ದರಿಂದ ನೇಮಕಾತಿ ಪ್ರಕ್ರಿಯೆಯಲ್ಲಿ ಕುಷ್ಠರೋಗದಿಂದ ಗುಣಮುಖರಾದವರು (Leprosy Cured) , ಶ್ರವಣದೋಷ (Hearing Impaired) ಅಭ್ಯರ್ಥಿಗಳನ್ನು ಮಾತ್ರ ಪರಿಗಣಿಸಬಹುದಾಗಿರುತ್ತದೆ.

## 3. ಅರ್ಜಿ ಶುಲ್ಕ:

| | |
|---|---|
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಹಾಗೂ ಮಹಿಳಾ ಅಭ್ಯರ್ಥಿಗಳು | ರೂ 250.00 |
| ಸಾಮಾನ್ಯ ವರ್ಗ,2ಎ,2ಬಿ, 3ಎ,3ಬಿ ವರ್ಗಕ್ಕೆ | ರೂ 500.00 |

ಅರ್ಜಿ ಶುಲ್ಕವನ್ನು ವೆಬ್ ಸೈಟ್ ವಿಳಾಸ **http://udupi.nic.in** ನಲ್ಲಿ ಲಭ್ಯವಾಗುವ ಚಲನ್ನಿನ ಮುದ್ರಿತ ಪ್ರತಿಯನ್ನು ತೆಗೆದುಕೊಂಡು ಸಿಂಡಿಕೇಟ್ ಬ್ಯಾಂಕ್ ನಲ್ಲಿ (**Deputy Commissioner, Udupi** ಈ ಹೆಸರಿಗೆ) ಪಾವತಿಸಿ ಸ್ವೀಕೃತಿಯನ್ನು ಪಡೆಯಬೇಕು.

## 4. ಅಭ್ಯರ್ಥಿಗಳಿಗೆ ಸೂಚನೆ ಮತ್ತು ಷರತ್ತುಗಳು:

1. ಅರ್ಜಿಗಳನ್ನು ಆನ್ ಲೈನ್ ಮೂಲಕ ಮಾತ್ರ ಸಲ್ಲಿಸತಕ್ಕದ್ದು. ಅಂಚೆ ಅಥವಾ ಕೊರಿಯರ್ ಅಥವಾ ಖುದ್ದಾಗಿ ಸ್ವೀಕರಿಸಲಾಗುವುದಿಲ್ಲ.
2. ವಯೋಮಿತಿ:-ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದಂದು ಕೆಳಕಂಡ ವಯೋಮಿತಿ ಹೊಂದಿರತಕ್ಕದ್ದು.

| | ಕನಿಷ್ಠ | ಗರಿಷ್ಠ |
|---|---|---|
| ಪ.ಜಾ/ಪ.ಪಂ/ಪ್ರ-1 | 18 ವರ್ಷ | 40 ವರ್ಷ |
| 2ಎ,2ಬಿ,3ಎ,3ಬಿ | 18ವರ್ಷ | 38 ವರ್ಷ |
| ಸಾಮಾನ್ಯ ವರ್ಗ | 18 ವರ್ಷ | 35 ವರ್ಷ |

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸುವಷ್ಟರ ಮಟ್ಟಿಗೆ ನಿಗಧಿಪಡಿಸಿದೆ.

ಅ) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು/ಅವಳು ಕೇಂದ್ರ ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವರೊ ಅಷ್ಟು ವರ್ಷಗಳಿಗೆ 3 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

ಆ) ಅಭ್ಯರ್ಥಿಯು ಅಂಗವಿಕಲನಾಗಿದ್ದರೆ 10 ವರ್ಷಗಳು.

ಇ) ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು.

3. ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ.
4. ನಿಗಧಿತ ದಿನಾಂಕದ ನಂತರ ಹಾಕಿದ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.
5. ಸರ್ಕಾರಿ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ಆನ್‌ಲೈನ್ ನಲ್ಲಿ ಭರ್ತಿ ಮಾಡಿದ ಅರ್ಜಿ ಪ್ರತಿಯನ್ನು ನೇಮಕಾತಿ ಪ್ರಾಧಿಕಾರ/ಇಲಾಖಾ ಮುಖ್ಯಸ್ಥರ ಮುಖಾಂತರ ಅರ್ಜಿಯನ್ನು ಸಲ್ಲಿಸುವುದು.
6. ಅಭ್ಯರ್ಥಿಗಳ ಆಯ್ಕೆ ಬಗ್ಗೆ ಪ್ರಚಾರ ಅಥವಾ ಶಿಫಾರಸ್ಸುಗಳನ್ನು ಮಾಡಿದರೆ ಅಂಥವರ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
7. ಅರ್ಜಿದಾರರೊಡನೆ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.
8. ಜಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳು (ಅಧ್ಯಕ್ಷರು, ಜಾತಿ ಆದಾಯ ಪರಿಶೀಲನಾ ಸಮಿತಿ) ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.

9. ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ಅಧ್ಯಕ್ಷರು, ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿ, ಉಡುಪಿ ಜಿಲ್ಲೆ ಇವರು ಕಾಯ್ದಿರಿಸಿಕೊಂಡಿರುತ್ತಾರೆ.

10. ಆಯ್ಕೆಯನ್ನು ಅಭ್ಯರ್ಥಿಯ ಮೆರಿಟ್ ಹಾಗೂ ಮೀಸಲಾತಿ ಆಧಾರದ ಮೇಲೆ ಮಾತ್ರ ಪರಿಗಣಿಸಲಾಗುವುದು.

## 5. ಅಂಗವಿಕಲ ಅಭ್ಯರ್ಥಿಗಳು :

ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 9(1-ಎ)ರ ಅನ್ವಯ ರಾಜ್ಯ ಸಿವಿಲ್ ಸೇವೆಯಲ್ಲಿನ ಗ್ರೂಪ್– "ಡಿ" ಹುದ್ದೆಗಳ ನೇರ ನೇಮಕಾತಿಯಲ್ಲಿ, ಅಂಗವಿಕಲರಿಗೆ ಶೇ.5 ರಷ್ಟು ಸಮತಳ ಮೀಸಲಾತಿ ಕಲ್ಪಿಸಲಾಗಿದೆ. ಸರ್ಕಾರದ ಆದೇಶ: ಕಂಇ 100 ಬಿ ಎಸ್ ಸಿ 2011 ದಿನಾಂಕ: 29.6.2012ರಂತೆ ಮೀಸಲಾತಿಯಂತೆ ನೀಡಲಾಗುವುದು. 24 ನೇ ಬಿಂದು ಚಲನವಲನ ವೈಕಲ್ಯ ಇರುವವರಿಗೆ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೆನೆನಿ 2005, ದಿನಾಂಕ 19/11/2005ರಲ್ಲಿ ನಿಗಧಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಪಡೆದು, ಅದರ ದೃಢೀಕೃತ ಪ್ರತಿಯನ್ನು ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು ಮತ್ತು ಆಯ್ಕೆ ಪ್ರಾಧಿಕಾರದ ಸರ್ಕಾರ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

## 6. ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು:

ಮೀಸಲಾತಿ ಸೌಲಭ್ಯ ಅಪೇಕ್ಷಿಸುವ ಅಭ್ಯರ್ಥಿಗಳು ಈ ಕೆಳಕಂಡ ಮೂಲ ದಾಖಲೆಗಳನ್ನು ನಿಗಧಿತ ನಮೂನೆಯಲ್ಲಿ ಮಾತ್ರ ಸಂಬಂಧಪಟ್ಟ ರೆವಿನ್ಯೂ ಪ್ರಾಧಿಕಾರದಿಂದ (ಸಂಬಂಧಪಟ್ಟ ತಹಶೀಲ್ದಾರ್ ರಿಂದ) ಪಡೆದು ಮೂಲ ದಾಖಲೆಗಳನ್ನು ಪರಿಶೀಲಿಸುವ ದಿನಾಂಕದಂದು ಹಾಜರುಪಡಿಸಬೇಕು. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ, ಅವರ ಅಭ್ಯರ್ಥಿತನವನ್ನು ಅರ್ಹತೆಯಡಿಯಲ್ಲಿ ಪರಿಗಣಿಸಲಾಗುವುದು.

ಪ.ಜಾ/ಪ.ಪಂ ದವರು . • ನಮೂನೆ-ಡಿ ಯಲ್ಲಿ, ಪ್ರವರ್ಗ-1 ದವರು : • ನಮೂನೆ-ಇ ಯಲ್ಲಿ, ಪ್ರವರ್ಗ 2ಎ,2ಬಿ,3ಎ,3ಬಿ: ದವರು • ನಮೂನೆ-ಎಫ್ ನಲ್ಲಿ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಚಾಲ್ತಿಯಲ್ಲಿರುವ ಪ್ರಮಾಣ ಪತ್ರವನ್ನು ಪಡೆದಿರಬೇಕು.

## 7. ಯೋಜನಾ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳು:

ಯೋಜನೆಗಳಿಂದ ನಿರಾಶ್ರಿತರ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ್ ರವರು ನೀಡಿದ ಪ್ರಮಾಣ ಪತ್ರವನ್ನು ಪಡೆದಿರಬೇಕು.

## 8. ಮಾಜಿ ಸೈನಿಕರ ಕುಟುಂಬದ ಅಭ್ಯರ್ಥಿಗಳು:

ಮಾಜಿ ಸೈನಿಕರು ಎನ್ನುವ ಬಗ್ಗೆ ಅಥವಾ ಭಾರತ ದೇಶದ ಒಕ್ಕೂಟ ಸಶಸ್ತ್ರ ದಳದಲ್ಲಿ ಸೇವೆ ಸಲ್ಲಿಸುತ್ತಿರುವಾಗ ಮರಣ ಹೊಂದಿದ ಅಥವಾ ಶಾಶ್ವತವಾಗಿ ಅಂಗಹೀನರಾದ ವ್ಯಕ್ತಿಗಳ ಕುಟುಂಬದ ಸದಸ್ಯರು ಎಂಬ ಬಗ್ಗೆ ಸಕ್ಷಮ ಮಿಲಿಟರಿ ಅಧಿಕಾರಿಗಳಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

## 9. ಗ್ರಾಮೀಣ ಅಭ್ಯರ್ಥಿ :

ಗ್ರಾಮೀಣ ಅಭ್ಯರ್ಥಿ ಎಂದರೆ, ಒಂದು ಹುದ್ದೆಗಾಗಿ ನಿಯಮಿಸಲಾದ ಅರ್ಹತಾ ಪರೀಕ್ಷೆಯು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಾಗಿದ್ದಲ್ಲಿ, 1ನೇ ತರಗತಿಯಿಂದ 10ನೇ ತರಗತಿಯವರೆಗೆ ವ್ಯಾಸಂಗದ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರಿಯಿಂದ ದೃಢೀಕೃತ ಗ್ರಾಮೀಣ ದೃಢೀಕರಣ ಪತ್ರವನ್ನು ಪಡೆದಿರಬೇಕು. ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು, ಈ ಮೀಸಲಾತಿಯನ್ನು ಪಡೆಯಲು ಅರ್ಹರು.

ಗ್ರಾಮೀಣ ಅಭ್ಯರ್ಥಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೈಮು ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2ರ ಪ್ರಮಾಣ ಪತ್ರವಲ್ಲದೇ, ಮೇಲ್ ಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಪಡೆದು, ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಠ ಜಾತಿ,ಪರಿಶಿಷ್ಠ ಪಂಗಡ, ಪ್ರವರ್ಗ-1 ಪ್ರವರ್ಗ-2ಎ,2ಬಿ,3ಎ,3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2ರಲ್ಲಿ ನಿಗಧಿತ ಪ್ರಾಧಿಕಾರಿಗಳಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲು ರುಜು ಮತ್ತು ಮೊಹರು ಮಾಡಿಸಿರಬೇಕು.

## 10.ಕನ್ನಡ ಮಾಧ್ಯಮ ಅಭ್ಯರ್ಥಿಗಳು :

ಸರ್ಕಾರದ ಅಧಿಸೂಚನೆ ಸಂ:ಡಿಪಿಎಆರ್ 71 ಎಸ್ ಆರ್ ಆರ್ 2001 ದಿ: 24.10.2002 ರಲ್ಲಿ ಹೊರಡಿಸಿರುವ ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ (9)(1)(ಸಿ)ರನ್ವಯ **ಅಭ್ಯರ್ಥಿಯು 1 ರಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆ ಎನ್ನುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರು ಪ್ರಮಾಣ ಪತ್ರವನ್ನು ಪಡೆದಿರಬೇಕು.**

## 11.ಅರ್ಹತಾ ಷರತ್ತುಗಳು :

- ಅರ್ಜಿದಾರರು ಭಾರತೀಯ ನಾಗರೀಕನಾಗಿರತಕ್ಕದ್ದು.
- ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವವಿರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತವಾಗಿರಬೇಕು. ದೈಹಿಕವಾಗಿ ಸಾಮರ್ಥ್ಯರಿರುವ ಬಗ್ಗೆ ಗ್ರೂಪ್ 'ಡಿ' (ಪೌರಕಾರ್ಮಿಕರು/ಲೋಡರ್ಸ್) ನೌಕರರಿಗೆ ನಿಗಧಿಪಡಿಸಲಾದ ಕನಿಷ್ಠ ದೇಹ ದಾರ್ಡ್ಯತೆ ಹೊಂದಿರಬೇಕು. **(Physically fit in all respects, Distance vision: 6/9 without glasses, Near vision Sn: 0.6, 0.6 without glasses, minimum standard for height – 152 (M) and 150 (F)), Chest – 84 (M) and 79 – (F) in cms).** ಈ ಬಗ್ಗೆ ಸರಕಾರಿ ವೈದ್ಯರ ಪ್ರಮಾಣ ಅರ್ಜಿಯೊಂದಿಗೆ ಸಲ್ಲಿಸುವುದು. **(ಅನುಬಂಧ - 1 ರಂತೆ)**
- **1:5** ಅನುಪಾತದಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ರೈಲ್ವೆ ಕಲಾಸಿ ನೇಮಕಾತಿಗೆ ನಿಗಧಿಪಡಿಸಿರುವ Physical efficiency test ನ್ನು ದಾಖಲೆಗಳನ್ನು ಪರಿಶೀಲಿಸುವ ದಿನದಂದು ನಡೆಸಿ ಅರ್ಹತೆ ಪರಿಗಣಿಸಲಾಗುವುದು.
- ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಅಧ್ಯಕ್ಷರು, ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿ, ಉಡುಪಿ ಜಿಲ್ಲೆ / ರಾಜ್ಯ ಸರ್ಕಾರ ಕಾಯ್ದಿರಿಸಿಕೊಂಡಿದೆ. ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಯನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.
- **ಕನಿಷ್ಟ 10 ವರ್ಷಗಳು ಸ್ಥಳೀಯ ನಿವಾಸಿಯಾಗಿರಬೇಕು. ಈ ಬಗ್ಗೆ ಕನಿಷ್ಠ 10 ವರ್ಷಗಳ ಕಾಲ ಇದೇ ಜಿಲ್ಲೆಯಲ್ಲಿ ವಾಸಿಸುತ್ತಿರುವ ಬಗ್ಗೆ ವಾಸ್ತವ್ಯ ದೃಢೀಕರಣ ಪತ್ರ ಸಲ್ಲಿಸುವುದು.**

## 12. ಕೆಳಕಂಡ ಮೂಲ ದಾಖಲೆಗಳನ್ನು ದಾಖಲಾತಿಗಳ ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸಬೇಕು.

- ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆ ಅಂಕಪಟ್ಟಿ/ಪ್ರಮಾಣ ಪತ್ರ.
- ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ/ವರ್ಗಾವಣೆ ಪ್ರಮಾಣ ಪತ್ರ/ಜನ್ಮ ದಿನಾಂಕವನ್ನು ತೋರಿಸುವ ಶೈಕ್ಷಣಿಕ ಸಂಚಿತ ದಾಖಲೆಯ ಉದ್ಧೃತ ಭಾಗ.
- ಸೈನಿಕ ಸೇವೆಯಿಂದ ಬಿಡುಗಡೆಯಾದ/ಮುಕ್ತಿಹೊಂದಿದ ಬಗೆಗಿನ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)

- ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ,3ಬಿ ಗಳಪ್ರಮಾಣ ಪತ್ರಗಳು (ಮೀಸಲಾತಿ ಕೋರಿದ್ದಲ್ಲಿ)
- ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)
- ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
- ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
- ಯೋಜನೆಗಳಿಂದ ನಿರಾಶ್ರಿತರಾದ ಬಗ್ಗೆ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
- ವಿಧವೆಯಾದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ
- Online ನಲ್ಲಿ ಪಡೆದ **Acknowledgement slip** ಮತ್ತು ಬ್ಯಾಂಕಿಗೆ ಅರ್ಜಿ ಶುಲ್ಕವನ್ನು ಪಾವತಿಸಿದ **challan** ನ ಕೌಂಟರ್ ಫೈಲ್ ನ ಮೂಲ ಪ್ರತಿಯನ್ನು ಹಾಜರು ಪಡಿಸುವುದು.
- Physical fitness certificate
- ವಾಸ್ತವ್ಯ ದೃಢೀಕರಣ ಪತ್ರ.
- ಮೇಲ್ಕಂಡಂತೆ ನಿಗದಿಪಡಿಸಿದ ಎಲ್ಲಾ ದಾಖಲೆಗಳನ್ನು ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಮಾತ್ರ ಮೂಲ ದಾಖಲಾತಿಗಳ ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

## 13.ಇತರೆ ಸೂಚನೆಗಳು:

1. ಅರ್ಜಿಯಲ್ಲಿ ತಪ್ಪು/ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳ ನೇಮಕಾತಿಯನ್ನು ವಜಾಗೊಳಿಸುವುದಲ್ಲದೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.
2. ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೇ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.
3. ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು, ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿ ಕೊಡಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.
4. ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮುನ್ನ ವೆಬ್ ಸೈಟ್ ನಲ್ಲಿ ತಿಳಿಸಿರುವ ಸೂಚನೆಗಳನ್ನು ಪಾಲಿಸುವುದು.
5. **ಅಂತಿಮವಾಗಿ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶಗಳನ್ನು ನೀಡುವ ಮುನ್ನ ಯಾವುದೇ ಹಂತದಲ್ಲಿ ಯಾವುದೇ ಕಾರಣ/ಮಾಹಿತಿ ನೀಡದೆ, ಈ ನೇಮಕಾತಿ ಪ್ರಕ್ರಿಯೆಯನ್ನು ಮುಂದೂಡುವ ಅಥವಾ ರದ್ದು ಪಡಿಸುವ ಅಥವಾ ವಿಧಿಸಲಾಗಿರುವ ಯಾವುದೇ ಷರತ್ತನ್ನು ಸಡಿಲಗೊಳಿಸುವ ಅಥವಾ ಹೆಚ್ಚುವರಿ ಷರತ್ತನ್ನು ವಿಧಿಸುವ, ತುಂಬಲಾಗುವ ಹುದ್ದೆಗಳ ಸಂಖ್ಯೆಯನ್ನು ಬದಲಾಯಿಸುವ/ನಿರ್ಣಯಿಸುವ ಅಧಿಕಾರವನ್ನು ಅಧ್ಯಕ್ಷರು, ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿ, ಉಡುಪಿ ಜಿಲ್ಲೆ ರವರು ಕಾಯ್ದಿರಿಸಿಕೊಂಡಿರುತ್ತಾರೆ.**
6. ಸರಕಾರದ ಅಧಿಸೂಚನೆ ಸಂಖ್ಯೆ: ಯುಡಿಡಿ/52/ಬಿಎಂಎಸ್/2009 ದಿನಾಂಕ: 13.01.2011 ರಂತೆ ಪೌರಕಾರ್ಮಿಕ ಹುದ್ದೆಗಳಿಗೆ 7ನೇ ತರಗತಿ ಅರ್ಹತಾ ಮಾನದಂಡವಾಗಿರುತ್ತದೆ. ಆದರೆ, ಇದೇ ಅಧಿಸೂಚನೆಯ ನಿಯಮ 11 ರಲ್ಲಿ ತಿಳಿಸಿರುವಂತೆ ಕಾಲಕಾಲಕ್ಕೆ ಕರ್ನಾಟಕ ನಾಗರೀಕ ನೇಮಕಾತಿಯ ನಿಯಮಾವಳಿಗಳಿಗೆ ಮಾಡಲಾಗುವ ತಿದ್ದುಪಡಿಗಳನ್ನು ಪರಿಗಣಿಸಬೇಕಾಗುತ್ತದೆ. **ಕರ್ನಾಟಕ ನಾಗರೀಕ ಸೇವೆ (ಸಾಮಾನ್ಯ ನೇಮಕಾತಿ) ನಿಯಮಗಳು 1977 ಇದಕ್ಕೆ ಸರಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್/43/ಹೆಚ್‌ಕೆಸಿ/2013 ದಿನಾಂಕ: 19.05.2014 ರಂತೆ ತಿದ್ದುಪಡಿ ಮಾಡಲಾಗಿದ್ದು, ಎಲ್ಲಾ 'ಡಿ' ಗ್ರೂಪ್ ಹುದ್ದೆಗಳಿಗೆ 10ನೇ ತರಗತಿ ಅರ್ಹತಾ ಮಾನದಂಡವಾಗಿರುತ್ತದೆ. ಅದರಂತೆ ಎಲ್ಲಾ ಪೌರಕಾರ್ಮಿಕ ಹುದ್ದೆಗಳ ನೇಮಕಾತಿಗಳಿಗೆ 10ನೇ ತರಗತಿಯನ್ನು ಅರ್ಹತಾ ಮಾನದಂಡವಾಗಿ ನಿಗಧಿಪಡಿಸಲಾಗಿದೆ.**
7. ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆಪಟ್ಟಿಯಲ್ಲಿ ಸೇರ್ಪಡೆಯಾಗಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಹಕ್ಕು ದೊರೆಯುವುದಿಲ್ಲ.

8. ಅಭ್ಯರ್ಥಿಯು ತಾನು ಡಿ ಗ್ರೂಪ್ (ಪೌರಕಾರ್ಮಿಕ/ ಲೋಡರ್ಸ್) ಹುದ್ದೆಯ ನೇಮಕಾತಿ ಆಯ್ಕೆ ಪ್ರಕ್ರಿಯೆಗೆ ಸಂಬಂಧಿಸಿದ ಎಲ್ಲಾ ಮಾಹಿತಿಗಳನ್ನು ಜಿಲ್ಲಾಧಿಕಾರಿ ಕಛೇರಿ ವೆಬ್ ಸೈಟ್ ನಿಂದ ಪಡೆಯತಕ್ಕದ್ದು.

9. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಈ ಕೆಳಕಂಡಂತೆ ಸಂಪರ್ಕಿಸತಕ್ಕದ್ದು.
**ಇ-ಮೇಲ್ : dudcudupi.pd@gmail.com**
**ಹೆಲ್ಪ್ ಲೈನ್ ನಂ: 0820 - 2574933**

08/10/15
**ಅಧ್ಯಕ್ಷರು,**
**ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ**
**ಜಿಲ್ಲಾಧಿಕಾರಿ, ಉಡುಪಿ ಜಿಲ್ಲೆ.**

ಪ್ರತಿಯನ್ನು :

1. ಮಾನ್ಯ ಸರಕಾರದ ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಬೆಂಗಳೂರು ಇವರ ಅವಗಾಹನೆಗೆ ಸಲ್ಲಿಸಿದೆ.
2. ಸರಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು ಇವರ ಅವಗಾಹನೆಗೆ ಸಲ್ಲಿಸಿದೆ.
3. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ಇವರ ಅವಗಾಹನೆಗೆ ಸಲ್ಲಿಸಿದೆ.
4. ಸಂಕಲನಾಧಿಕಾರಿ, ಸರಕಾರಿ ಹೊರವಲಯ ಮುದ್ರಣಾಲಯ, ಆರ್.ವಿ.ಕಾಲೇಜು, ಅಂಚೆ 8ನೇ ಮೈನ್ ಮೈಸೂರು ,ರಸ್ತೆ ಕೆಂಗೇರಿ ಬೆಂಗಳೂರು – 560059. ಕರ್ನಾಟಕ ರಾಜ್ಯ ಪತ್ರ ಬೆಂಗಳೂರು ಇವರಿಗೆ ಕಳುಹಿಸುತ್ತಾ ಈ ಅಧಿಸೂಚನೆಯನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ 100 ಪ್ರತಿಗಳನ್ನು ಜಿಲ್ಲಾಧಿಕಾರಿಗಳು, ಉಡುಪಿ ಜಿಲ್ಲೆ ಇವರಿಗೆ ಒದಗಿಸಲು ಕೋರಿದೆ.
5. ಮಹಾಲೇಖಪಾಲರು(ಎ ಮತ್ತು ಇ) ಕರ್ನಾಟಕ, ಬೆಂಗಳೂರು ಇವರಿಗೆ ಸಲ್ಲಿಸಿದೆ.
6. ಪ್ರಾದೇಶಿಕ ಆಯುಕ್ತರು ಮೈಸೂರು ವಿಭಾಗ, ಮೈಸೂರು ರವರ ಅವಗಾಹನೆಗೆ ಸಲ್ಲಿಸಿದೆ.
7. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಕಳುಹಿಸುತ್ತಾ ,ತಮ್ಮ ಕಾರ್ಯಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
8. ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು ಉಡುಪಿ ಜಿಲ್ಲೆ, ಉಡುಪಿ ರವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ
9. ಜಿಲ್ಲಾ ಅಧಿಕಾರಿ ಹಿಂದುಳಿದ ವರ್ಗಗಳ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ, ಉಡುಪಿ ಜಿಲ್ಲೆ, ಉಡುಪಿ.
10. ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಉಡುಪಿ ಜಿಲ್ಲೆ, ಉಡುಪಿ.
11. ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ.
12. ಈ ಕಾರ್ಯಾಲಯದ ಸೂಚನಾ ಫಲಕಕ್ಕೆ.

ಕರ್ನಾಟಕ ಸರ್ಕಾರ

ಜಿಲ್ಲಾಧಿಕಾರಿಯವರ ಕಛೇರಿ, ರಜತಾದ್ರಿ, ಮಣಿಪಾಲ, ಉಡುಪಿ ಜಿಲ್ಲೆ – 576104

Phone: 0820 - 2574933(O),
0820 - 2574926(F),

E-Mail: deo.udupi@gmail.com,
dudc_udupi@yahoo.co.in
Website: www.udupi.nic.in

ನಂ: ಜಿನಕೋ(2)/ಸಿಬ್ಬಂದಿ/ಸಿಆರ್/49/2015-16 ದಿನಾಂಕ : 08.10.2015

ಅನುಬಂಧ - 1 .

**ದೈಹಿಕ ಸಾಮರ್ಥ್ಯ (Physical Fitness)**

ಉಡುಪಿ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಖಾಲಿ ಇರುವ "ಡಿ" ಗ್ರೂಪ್ (ಪೌರಕಾರ್ಮಿಕರು /ಲೋಡರ್ಸ್) ಹುದ್ದೆಗಳನ್ನು ನೇರನೇಮಕಾತಿ ಮಾಡುವಾಗ ಸರ್ಕಾರದ ಪತ್ರ ಸಂ: ನಆಇ/112/ಎಂಎನ್‌ಇ/2014 ದಿನಾಂಕ: 07.09.2015 ರಲ್ಲಿ ಸೂಚಿಸಿದಂತೆ ದೈಹಿಕ ಸಾಮಾರ್ಥ್ಯ (Physical Fitness) ವನ್ನು ರೈಲ್ವೆ ಕಲಾಸಿ ಹುದ್ದೆಗಳಿಗೆ ನಿಗಧಿಪಡಿಸಿರುವಂತೆ ಪರಿಗಣಿಸಬೇಕಾಗುತ್ತದೆ. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಈ ಕೆಳಗಿನಂತೆ ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಹೊಂದಿರಬೇಕು.

**(Ref: Indian Railways letter No.E (NG - II) 96-RR-1/62 (Vol . II) dated: 12.03.2007 and No.E (NG – II) 2012-RR-1/14 dated: 12.11.2012 criteria for physical efficiency test for railway khalasi.)**

| Sl.No. | Physical Standards | Male | Female |
|---|---|---|---|
| 1 | Height (cm) | 152 | 150 |
| 2 | Chest girth fully expanded (cm) | 84 | 79 |
| 3 | Expansion (cm) | 5 | 5 |
| 4 | Running capacity | 1000 meters in 4 minutes and 15 seconds | 400 meters in 3 minutes and 10 seconds |
| 5 | Visual standards | 6/9 without glasses, Near vision Sn: 0.6, 0 6 without glasses | |

ಸೂಚನೆ: ತಾತ್ಕಾಲಿಕ ಪರಿಶೀಲನಾ ಪಟ್ಟಿಯಲ್ಲಿ ಪ್ರಕಟಿಸಲಾಗುವ ಅಭ್ಯರ್ಥಿಗಳು ದೈಹಿಕ ಸಾಮರ್ಥ್ಯ ಪರಿಶೀಲನೆಗೆ ಮತ್ತು ದಾಖಲಾತಿಗಳ ಪರಿಶೀಲನೆಗೆ ಮೂಲ ದಾಖಲೆಗಳೊಂದಿಗೆ ಜಿಲ್ಲಾ ಕ್ರಿಡಾಂಗಣ ಅಜ್ಜರಕಾಡು, ಉಡುಪಿ ಇಲ್ಲಿಗೆ ದಿನಾಂಕ: 03.12.2015 ಸಮಯ : 10.30 ಹಾಜರಾಗತಕ್ಕದ್ದು.

ಅಧ್ಯಕ್ಷರು,
ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ
ಜಿಲ್ಲಾಧಿಕಾರಿ, ಉಡುಪಿ ಜಿಲ್ಲೆ.